**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ರಾಮನಗರ.**

ಸಿ.ಸಿ. ನಂ.04/2021

CW-5/PW-3

| | | |
|---|---|---|
| ಹೆಸರು | ಃ- | ಸುಂದರೇಶ್ |
| ತಂದೆ ಹೆಸರು | ಃ- | ವರದಯ್ಯ |
| ವಯಸ್ಸು | ಃ- | 45 ವರ್ಷ |
| ವೃತ್ತಿ | ಃ- | ಗ್ಯಾಸ್ ಅಂಗಡಿಯಲ್ಲಿ ಕೆಲಸ |
| ವಾಸ ಸ್ಥಳ | ಃ- | ಕಲ್ಲುಗೋಪಹಳ್ಳಿ |
| ದಿನಾಂಕ | ಃ- | 09.01.2025. |

ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಆರೋಪಿ ಸಮೀರ್ ಹಾಗೂ ಕಾ.ಸಂ.ಬಾ ಸಮೀರ್ ಪಾಷ ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಏನನ್ನೂ ವಶಪಡಿಸಿಕೊಂಡಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಾಹನವನ್ನು ಅಮಾನತುಪಡಿಸಿಕೊಂಡಿಲ್ಲ ಹಾಗೂ ಯಾವುದೇ ಮಹಜರ್ ಮಾಡಿಲ್ಲ. ಸುಮಾರು 2 ವರ್ಷಗಳ ಹಿಂದೆ ನನ್ನ ಕೆಲಸದ ಮೇರೆಗೆ ಬಿಡದಿ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ಒಂದು ದಾಖಲೆಗೆ ಸಹಿ ಪಡೆದುಕೊಂಡರು. ಯಾವ ವಿಚಾರಕ್ಕೆ ಎಂದು ಗೊತ್ತಿಲ್ಲ. ಮಹಜರ್‌ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ.

ಈ ಹಂತದಲ್ಲಿ ಮೂಲ ಅಮಾನತು ಪಂಚನಾಮೆ ಕಡತದಲ್ಲಿ ಲಭ್ಯವಿಲ್ಲದ ಕಾರಣ ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು ಕಾಲಾವಕಾಶ ಕೋರಿರುತ್ತಾರೆ. ಆದ್ದರಿಂದ

<u>ಸಿ.ಸಿ. ನಂ.04/2021</u>
CW-5/PW-3

ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

**(ಲೋಕೇಶ)**
ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು.
ರಾಮನಗರ.